**ಕರ್ನಾಟಕ ಸರ್ಕಾರ**
**ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ**

ಸಂ: DTE-ADMI0SCH2/4/2024

ಆಯುಕ್ತರವರ ಕಛೇರಿ,
ತಾಂತ್ರಿಕ ಶಿಕ್ಷಣ ಇಲಾಖೆ,
ಬೆಂಗಳೂರು-560 001.
ದಿನಾಂಕ: 12-09-2024.

**-:: ಸುತ್ತೋಲೆ ::-**

**ವಿಷಯ :** 2024-25ನೇ ಶೈಕ್ಷಣಿಕ ಸಾಲಿನಲ್ಲಿ ರಾಜ್ಯದ ಎಲ್ಲಾ ಸರ್ಕಾರಿ ಪಾಲಿಟೆಕ್ನಿಕ್ ಗಳಲ್ಲಿ ಪ್ರಥಮ ಮತ್ತು ತೃತೀಯ ಸೆಮಿಸ್ಟರ್ (ಲ್ಯಾಟರಲ್ ಎಂಟ್ರಿ)ಯಲ್ಲಿ ಪ್ರವೇಶ ಪಡೆದು ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳ ಬೋನಫೈಡ್ ಡೇಟಾವನ್ನು ಇಲಾಖೆಯ ಪ್ರವೇಶಾತಿ ಪೋರ್ಟಲ್‌ನಲ್ಲಿ ಅಪ್‌ಡೇಟ್ ಮಾಡುವ ಬಗ್ಗೆ.

**ಉಲ್ಲೇಖ :** ಈ ಕಛೇರಿಯ ಸುತ್ತೋಲೆ ಸಂಖ್ಯೆ: DTE-ADM10ACM2/51/2024, Dated: 22-07-2024.

**-0000000-**

2024-25ನೇ ಶೈಕ್ಷಣಿಕ ಸಾಲಿನಲ್ಲಿ ರಾಜ್ಯದ ಎಲ್ಲಾ ಸರ್ಕಾರಿ ಪಾಲಿಟೆಕ್ನಿಕ್‌ಗಳಲ್ಲಿ ಪ್ರಥಮ ಮತ್ತು ತೃತೀಯ ಸೆಮಿಸ್ಟರ್ (ಲ್ಯಾಟರಲ್ ಎಂಟ್ರಿ)ಗಳಲ್ಲಿ ಪ್ರವೇಶ ಪಡೆದು ವ್ಯಾಸಂಗ ಮಾಡುತ್ತಿರುವ ಎಲ್ಲಾ ಅರ್ಹ ವಿದ್ಯಾರ್ಥಿಗಳು ರಾಜ್ಯ ವಿದ್ಯಾರ್ಥಿವೇತನ ತಂತ್ರಾಂಶದಲ್ಲಿ ಆನ್‌ಲೈನ್ ಮೂಲಕ ವಿವಿಧ ಯೋಜನೆಗಳ ವಿದ್ಯಾರ್ಥಿವೇತನಕ್ಕೆ ಅರ್ಜಿ ಸಲ್ಲಿಸಲು ಅನುವು ಮಾಡಿಕೊಡಲು, ವಿದ್ಯಾರ್ಥಿಗಳ ಬೋನಫೈಡ್ ಡೇಟಾದ ಮಾಹಿತಿಯನ್ನು Webservice ಮೂಲಕ ಎಸ್.ಎಸ್.ಪಿ (State Scholarship Portal) ಇಲಾಖೆಗೆ ಕಳುಹಿಸಿಕೊಡಬೇಕಾಗಿರುವುದರಿಂದ ಸಂಬಂಧಿಸಿದ ಪ್ರಾಂಶುಪಾಲರು/ಸಿಬ್ಬಂದಿ ವರ್ಗದವರು ಉಲ್ಲೇಖಿತ ಪತ್ರದಲ್ಲಿ ತಿಳಿಸಿರುವಂತೆ ವಿದ್ಯಾರ್ಥಿಗಳ ದಾಖಲೆಗಳನ್ನು ಕ್ರಮಬದ್ಧವಾಗಿ ಪರಿಶೀಲಿಸಿ, ಅನುಮೋದನೆಗೊಂಡ ವಿದ್ಯಾರ್ಥಿಗಳ ಮಾಹಿತಿಯನ್ನು ತಾಂತ್ರಿಕ ಶಿಕ್ಷಣ ಇಲಾಖೆಯ ಪ್ರವೇಶಾತಿ ಪೋರ್ಟಲ್‌ನಲ್ಲಿ (SSP) Https://dtetech.karnataka.gov.in/dteone/emp/login.aspx ರಲ್ಲಿ ಸೂಚಿಸಿರುವಂತೆ ಅತೀ ಜರೂರಾಗಿ ಅಪಡೇಟ್ ಮಾಡಲು ಸೂಚಿಸಲಾಗಿದೆ.

**ಸಹಾಯಕ ನಿರ್ದೇಶಕರು (ಎಂಪಿಸಿ)**

**ಇವರಿಗೆ,**

1. **ಪ್ರಾಂಶುಪಾಲರು,** ಸರ್ಕಾರಿ ಪಾಲಿಟೆಕ್ನಿಕ್‌ಗಳಿಗೆ - ಇವರ ಮುಂದಿನ ಸೂಕ್ತ ಕ್ರಮಕ್ಕಾಗಿ.
2. **ಇ-ಆಡಳಿತ ವಿಭಾಗಕ್ಕೆ** - ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಚುರಪಡಿಸಲು.